## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: 2025-26ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ವರ್ಗಾವಣೆ ಮಾರ್ಗಸೂಚಿಗಳು.**

**ಓದಲಾಗಿದೆ:**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇನೌವ 2025, ದಿನಾಂಕ: 12.05.2025.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ, 2025-26ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳನ್ನು ನಿಯಂತ್ರಿಸಲು ವರ್ಗಾವಣಾ ಮಾರ್ಗಸೂಚಿಗಳನ್ನು ನೀಡಲಾಗಿದೆ. ಸದರಿ ಆದೇಶದ ಕಂಡಿಕೆ 4ರಲ್ಲಿ 2025-26ನೇ ಸಾಲಿನ ಸಾರ್ವತ್ರಿಕ ವರ್ಗಾವಣೆಗಳನ್ನು ಸದರಿ ಆದೇಶದಲ್ಲಿ ವಿವರಿಸಿರುವ ಷರತ್ತುಗಳಿಗೊಳಪಟ್ಟು ದಿನಾಂಕ: 12.05.2025 ರಿಂದ 14.06.2025 ರವರೆಗೆ ಕೈಗೊಳ್ಳಲು ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಆಯಾ ಇಲಾಖಾ ಸಚಿವರಿಗೆ ಹಾಗೂ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ನೌಕರರಿಗೆ ಸಂಬಂಧಿಸಿದಂತೆ ಆಯಾ ನೇಮಕಾತಿ ಪ್ರಾಧಿಕಾರಗಳಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿತ್ತು. ಸದರಿ ವರ್ಗಾವಣೆ ಅವಧಿಯನ್ನು ವಿಸ್ತರಿಸುವುದು ಅವಶ್ಯಕವೆಂದು ಪರಿಗಣಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇನೌವ 2025, ಬೆಂಗಳೂರು, ದಿನಾಂಕ: 17.06.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 12.05.2025ರ ಸರ್ಕಾರಿ ಆದೇಶದಲ್ಲಿ ವಿವರಿಸಿರುವ ಷರತ್ತಿಗೊಳಪಟ್ಟು, 2025-26ನೇ ಸಾಲಿನಲ್ಲಿ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಆಯಾ ಇಲಾಖಾ ಸಚಿವರಿಗೆ ಹಾಗೂ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ನೌಕರರಿಗೆ ಸಂಬಂಧಿಸಿದಂತೆ ಆಯಾ ನೇಮಕಾತಿ ಪ್ರಾಧಿಕಾರಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದ ಅವಧಿಯನ್ನು **ದಿನಾಂಕ: 30.06.2025ರವರೆಗೆ** ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪ್ರತಿಭಾ. ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-3).

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.

..2.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು.
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು ಮತ್ತು ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/
7. ಕಾರ್ಯದರ್ಶಿಗಳು.
8. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
12. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
13. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9
15. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
17. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
18. ಎಲ್ಲಾ ಸಚಿವರ / ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
19. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯ ಪುರಿ, ನವದೆಹಲಿ-110 011.
20. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು.
21. ಸಚಿವಾಲಯದ ಎಲ್ಲಾ ಶಾಖೆಗಳು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
23. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.

**(*ಪ್ರತ್ಯೇಕ ಪತ್ರದೊಂದಿಗೆ)**